ಅನುಕಂಪದ ಆಧಾರದ ಮೇಲೆ ಹುದ್ದೆ

734 - ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ (ಸೋಮವಾರಪೇಟೆ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) *ಕೊಡಗು ಜಿಲ್ಲೆಯಲ್ಲಿ ಅನುಕಂಪದ ಆಧಾರದ ಮೇಲೆ ಕೆಲಸ ಒದಗಿಸಲಾದವರ ಸಂಖ್ಯೆ ಎಷ್ಟು?*

2) *ಕೊಡಗು ಜಿಲ್ಲೆಯ ಮಡಿಕೇರಿ ಸಂಚಾರಿ ಠಾಣೆಯಲ್ಲಿ ಸಿವಿಲ್ ಮುಖ್ಯ ಪೇದೆಯಾಗಿ ಕೆಲಸ ಮಾಡುತ್ತಿದ್ದ ದಿವಂಗತ ಹೆಚ್.ಎನ್. ಕೆಂಚಪ್ಪನವರ ಮಗಳಿಗೆ ಅನುಕಂಪದ ಆಧಾರದ ಮೇಲೆ ಕೆಲಸ ಕೊಡದಿರುವುದಕ್ಕೆ ಕಾರಣಗಳೇನು?*

3) *ಅವಳಿಗೆ ಅನುಕಂಪದ ಆಧಾರದ ಮೇಲೆ ಕೆಲಸ ಕೊಡಲು ಸರ್ಕಾರ ಕೂಡಲೇ ಕ್ರಮ ತೆಗೆದುಕೊಳ್ಳುವುದೇ?*

ಶ್ರೀ ಮಲ್ಲಿಕಾರ್ಜುನ ಖರ್ಗೆ ಎಂ. (ಗೃಹ ಸಚಿವರು) :

1) ಕೊಡಗು ಜಿಲ್ಲೆಯಲ್ಲಿರುವ ಪೊಲೀಸ್ ಇಲಾಖೆಯ ಕಛೇರಿಯಲ್ಲಿ ಅನುಕಂಪದ ಆಧಾರದ ಮೇಲೆ 6 ಜನರಿಗೆ ಕೆಲಸ ಒದಗಿಸಲಾಗಿದೆ.

2) ಪೊಲೀಸ್ ಇಲಾಖೆಯಲ್ಲಿ ಕೊಡಗು ಜಿಲ್ಲೆಯಲ್ಲಿ ಹುದ್ದೆಯು ಖಾಲಿಯಿಲ್ಲದ ಪ್ರಯುಕ್ತ ಮೈಸೂರು ವಿಭಾಗಾಧಿಕಾರಿಗಳು ಕಂದಾಯ ಇಲಾಖೆ, ಮೈಸೂರು ಇವರಿಗೆ ಪ್ರಸ್ತಾವನೆಯನ್ನು ಎಲ್ಲಾ ದಾಖಲಾತಿಗಳೊಂದಿಗೆ ಕಳುಹಿಸಲು ಕ್ರಮ ಕೈಗೊಂಡಿದೆ.

3) ಯಾವ ಇಲಾಖೆಯಲ್ಲಿ ಹುದ್ದೆಗಳು ಖಾಲಿಯಿವೆಯೇ ಆ ಇಲಾಖೆಯಲ್ಲಿ ಇವರ ನೇಮಕಾತಿಯಾಗುವಂತೆ ವಿಭಾಗಾಧಿಕಾರಿಯವರು ಕ್ರಮ ಕೈಗೊಳ್ಳುತ್ತಾರೆ.

ಸೋಮವಾರಪೇಟೆ ತಾಲ್ಲೂಕಿನ ಆಲೂರು, ಸಿದ್ಧಾಪುರ, ಮಾದಾಪುರ ಹಾಗೂ ಹೆಬ್ಬಾಲಿಯಲ್ಲಿ ಪೊಲೀಸ್ ಠಾಣೆ ತೆಗೆಯುವುದು

735 - ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ (ಸೋಮವಾರಪೇಟೆ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕೊಡಗು ಜಿಲ್ಲೆ, ಸೋಮವಾರಪೇಟೆ ತಾಲ್ಲೂಕಿನ ಆಲೂರು, ಸಿದ್ಧಾಪುರ, ಮಾದಾಪುರದಲ್ಲಿ ಹಾಗೂ ಹೆಬ್ಬಾಲಿಯಲ್ಲಿ ಪೊಲೀಸ್ ಠಾಣೆ ತೆರೆಯುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?*

ಆ) *ಹಾಗಿದ್ದಲ್ಲಿ, ಎಂದಿನಿಂದ ಪೊಲೀಸ್ ಠಾಣೆ ತೆರೆಯಲು ಕ್ರಮ ತೆಗೆದುಕೊಳ್ಳಲಾಗುವುದು?*